## ಕರ್ನಾಟಕ ಸರ್ಕಾರದ ನಡವಳಿಗಳು

*ವಿಷಯ:-* ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು ಮತ್ತು ಗ್ರಾಮೀಣ ಕುಡಿಯುವ ನೀರು ಸರಬರಾಜು ವಿಭಾಗ, ರಾಯಚೂರು ಇಲ್ಲಿ ಎನ್.ಆರ್.ಡಿ.ಡಬ್ಲ್ಯೂ.ಪಿ ಯೋಜನೆಯಡಿ ಕ್ರಿಯಾ ಯೋಜನೆಯಲ್ಲಿ ಸೇರಿಲ್ಲದ ಕೊಳವೆ ಬಾವಿಗಳನ್ನು ಹೆಚ್ಚುವರಿಯಾಗಿ ಕೊರೆದು ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟು ಮಾಡಿರುವ ಆರೋಪಗಳಿಗೆ ಸಂಬಂಧಿಸಿದಂತೆ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಇಲಾಖಾ ವಿಚಾರಣೆ, ವಿಚಾರಣಾಧಿಕಾರಿಯವರನ್ನು ನೇಮಿಸುವ ಬಗ್ಗೆ ಆದೇಶ.

*ಓದಲಾಗಿದೆ:*

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ಇವರ ಪತ್ರ ಸಂಖ್ಯೆ:ಜಿಪರಾ/ಸಿಬ್ಬಂದಿ-1/27/ಆ.ಪ/14-15/2015-16, ದಿ:30.10.2015
2. ಸರ್ಕಾರದ ಕಾರಣ ಕೇಳುವ ನೋಟಿಸ್ ಸಂಖ್ಯೆ:ಗ್ರಾಅಪ 43 ಇಎಸ್‌ಕ್ಯೂ 2015, ದಿನಾಂಕ:07.11.2016.
3. ಅಪಾಧಿತರ ವಿವರಣೆ ದಿನಾಂಕ:
   1. ಜಿ.ಎನ್.ಪ್ರಕಾಶ್, ಸ.ಕಾ.ಇಂ- ದಿ:07.2.2017,
   2. ಮಲ್ಲಿಕಾರ್ಜುನ ಸಾಹು, ಹಿಂದಿನ ಕಾ.ಇಂ ದಿ:3.2.2017.
   3. ಜಿ.ಪ್ರಭುಶಂಕರ್, ಹಿಂದಿನ ಕಾ.ಇಂ. ದಿ:11.1.17.

### ಪ್ರಸ್ತಾವನೆ:-

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ಇವರು ಮೇಲೆ ಓದಲಾದ ಕ್ರಮಾಂಕ (1)ರ ದಿನಾಂಕ:30.10.2015 ರ ಪತ್ರದೊಂದಿಗೆ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು ಮತ್ತು ಗ್ರಾಮೀಣ ಕುಡಿಯುವ ನೀರು ಸರಬರಾಜು ವಿಭಾಗ, ರಾಯಚೂರು ಇಲ್ಲಿ ಎನ್.ಆರ್.ಡಿ.ಡಬ್ಲ್ಯೂ.ಪಿ ಯೋಜನಯಡಿ ಕ್ರಿಯಾ ಯೋಜನೆಯಲ್ಲಿ ಸೇರಿಲ್ಲದ ಕೊಳವೆ ಬಾವಿಗಳನ್ನು ಹೆಚ್ಚುವರಿಯಾಗಿ ಕೊರೆದು ಸರ್ಕಾರಕ್ಕೆ ಆರ್ಥಿಕ ನಷ್ಟ ಉಂಟಾಗಲು ಈ ಕೆಳಕಂಡ ಅಧಿಕಾರಿಗಳು ಕಾರಣರಾಗಿರುತ್ತಾರೆ ಎಂದು ಆರೋಪಿಸಿ, ಅವರ ವಿರುದ್ಧ ಶಿಸ್ತುಕ್ರಮ ಕೈಗೊಳ್ಳಲು ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಿದ್ದರು.

1. ಶ್ರೀ ಜಿ.ಎನ್.ಪ್ರಕಾಶ್, ಹಿಂದಿನ ಪ್ರಭಾರಿ, ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು.
2. ಶ್ರೀ ಮಲ್ಲಿಕಾರ್ಜುನ ಸಾಹು, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು.
3. ಶ್ರೀ ಬಿ.ಮಂಜುನಾಥ್, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು.
4. ಶ್ರೀ ಜಿ.ಪ್ರಭುಶಂಕರ್, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ರಾಯಚೂರು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ಇವರ ಪ್ರಸ್ತಾವನೆಯನ್ನು ಪರಿಶೀಲಿಸಿ, ಮೇಲೆ ತಿಳಿಸಿರುವ 4 ಮಂದಿ ಅಧಿಕಾರಿಗಳ ಪೈಕಿ ಶ್ರೀ ಮಲ್ಲಿಕಾರ್ಜುನ ಸಾಹು ಮತ್ತು ಶ್ರೀ ಜಿ.ಪ್ರಭುಶಂಕರ್, ಇವರುಗಳು ಸೇವೆಯಿಂದ ನಿವೃತ್ತಿ ಹೊಂದಿದ್ದು ಅವರ ವಿರುದ್ಧ ಇಲಾಖೆ ವಿಚಾರಣೆ ನಡೆಸಲು ಕರ್ನಾಟಕ ನಾಗರೀಕ ಸೇವಾ ನಿಯಮಗಳು 214 ರಡಿ ಮಂಜೂರಾತಿ ಆದೇಶ ಹೊರಡಿಸಿ, ಎಲ್ಲಾ ನಾಲ್ಕು ಮಂದಿ ಅಧಿಕಾರಿಗಳ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ವಿವರವಾದ ಇಲಾಖೆ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 1957 ರ ನಿಯಮ 11 ರಡಿ ಜರುಗಿಸಲು ತೀರ್ಮಾನಿಸಿ, ಮೇಲೆ ಓದಲಾದ ಕ್ರಮಾಂಕ (2) ರ ದಿನಾಂಕ:7.11.2016 ರಂದು ಕಾರಣ ಕೇಳುವ ನೋಟಿಸ್‌ನೊಂದಿಗೆ ಆರೋಪ ಪಟ್ಟಿಯನ್ನು ಜಾರಿ ಮಾಡಲಾಗಿರುತ್ತದೆ.

---2

ಮೇಲೆ ಓದಲಾದ ಕ್ರಮಾಂಕ (3) ರಲ್ಲಿ ಮೂವರು ಅಧಿಕಾರಿಗಳು ವಿವರಣೆ ಸಲ್ಲಿಸಿ, ಅವರುಗಳ ವಿರುದ್ಧದ ಆರೋಪಗಳನ್ನು ನಿರಾಕರಿಸಿರುತ್ತಾರೆ. ಶ್ರೀ ಬಿ.ಮಂಜುನಾಥ್, ಇವರಿಗೆ ಆರೋಪ ಪಟ್ಟಿ ಜಾರಿಯಾಗಿದ್ದು, ಅವರ ಕೋರಿಕೆಯಂತೆ ವಿವರಣೆ ಸಲ್ಲಿಸಲು ಸಾಕಷ್ಟು ಕಾಲಾವಕಾಶಗಳನ್ನು ನೀಡಿದ್ದರೂ, ಸದರಿಯವರು ಯಾವುದೇ ವಿವರಣೆಯನ್ನು ಸಲ್ಲಿಸಿರುವುದಿಲ್ಲ. ವಿವರಣೆ ಸಲ್ಲಿಸಿರುವ ಅಧಿಕಾರಿಗಳು ರಾಯಚೂರು ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಮತ್ತು ಯೋಜನಾಧಿಕಾರಿಗಳು ಸಲ್ಲಿಸಿದ್ದ ವರದಿಯನ್ನಾಧರಿಸಿ ಮಾಡಿರುವ ಆರೋಪಗಳಾಗಿದ್ದು ಆಧಾರ ರಹಿತವಾಗಿರುತ್ತವೆ ಎಂದು ತಿಳಿಸಿ ಅವರ ವಿರುದ್ಧದ ಆರೋಪಗಳನ್ನು ನಿರಾಕರಿಸಿರುತ್ತಾರೆ. ಮೂವರ ಅಧಿಕಾರಿಗಳು ಅವರ ವಿರುದ್ಧದ ಆರೋಪಗಳನ್ನು ನಿರಾಕರಿಸಿರುವುದರಿಂದ ಹಾಗೂ ಸಾಕಷ್ಟು ಕಾಲವಾಕಾಶ ನೀಡಿದ್ದರೂ ಶ್ರೀ ಬಿ.ಮಂಜುನಾಥ ಇವರು ಯಾವುದೇ ವಿವರಣೆ ಸಲ್ಲಿಸದೇ ಇರುವುದರಿಂದ ಆರೋಪಗಳ ಸತ್ಯಾಸತ್ಯತೆಯನ್ನು ಅರಿಯುವ ಸಲುವಾಗಿ ಪ್ರಕರಣದಲ್ಲಿ ವಿವರವಾದ ಇಲಾಖೆ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ.ಮೇ) ನಿಯಮಗಳು 1957 ರ ನಿಯಮ 11 ರ ಅನುಸಾರ ನಡೆಸುವುದು ಅಗತ್ಯವೆಂದು ಸರ್ಕಾರವು ನಿರ್ಧರಿಸಿದೆ. ಆದ್ದರಿಂದ. ಈ ಆದೇಶ.

## ಆದೇಶ ಸಂಖ್ಯೆ: ಗ್ರಾಅಪ 43 ಇಎನ್‌ಕ್ಯೂ 2015, ಬೆಂಗಳೂರು, ದಿನಾಂಕ:08.3.2017

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, ಈ ಕೆಳಕಂಡ ಅಧಿಕಾರಿ/ನೌಕರರ ವಿರುದ್ಧದ ಆರೋಪಗಳಿಗೆ ಸಂಬಂಧಿಸಿದಂತೆ ಜಂಟಿ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11 ಮತ್ತು 13 ರ ಅನುಸಾರ ನಡೆಸಲು ನಿಯಮ 11 (2) ರಡಿ ನಿವೃತ್ತ ಜಿಲ್ಲಾ ನ್ಯಾಯಾಧೀಶರಾದ ಶ್ರೀ ಎ.ಎಂ.ಪತ್ತಾರ ಇವರನ್ನು ವಿಚಾರಣಾಧಿಕಾರಿಯನ್ನಾಗಿ ಹಾಗೂ ನಿಯಮ 11 (5)(ಸಿ) ರನ್ವಯ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ರಾಯಚೂರು ಇವರನ್ನು ಮಂಡನಾಧಿಕಾರಿಯನ್ನಾಗಿ ನೇಮಿಸಿದೆ.

1. ಶ್ರೀ ಜಿ.ಎನ್.ಪ್ರಕಾಶ್, ಹಿಂದಿನ ಪ್ರಭಾರಿ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು.
2. ಶ್ರೀ ಮಲ್ಲಿಕಾರ್ಜುನ ಸಾಹು, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು. (ಹಾಲಿ ನಿವೃತ್ತ)
3. ಶ್ರೀ ಬಿ.ಮಂಜುನಾಥ್, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಯಚೂರು.
4. ಶ್ರೀ ಜಿ.ಪ್ರಭುಶಂಕರ್, ಹಿಂದಿನ ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ರಾಯಚೂರು (ಹಾಲಿ ನಿವೃತ್ತ)

ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ ಕಛೇರಿಯಲ್ಲಿ ವಿಚಾರಣೆ ಅಗತ್ಯವಿರುವ ಸ್ಥಳಾವಕಾಶ, ಲೇಖನ ಸಾಮಗ್ರಿಗಳನ್ನು ಒದಗಿಸಲು ಅಧೀಕ್ಷಕ ಇಂಜಿನಿಯರ್ ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಧಾರವಾಡ ಇವರಿಗೆ ಸೂಚಿಸಿದೆ.

ವಿಚಾರಣಾಧಿಕಾರಿಗಳು ಈ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 11 ರಲ್ಲಿ ನಿಗಧಿಪಡಿಸಿರುವ ಕಾರ್ಯವಿಧಾನದ ಪ್ರಕಾರ ನಡೆಸಿ, 3 ತಿಂಗಳೊಳಗಾಗಿ ಸರ್ಕಾರಕ್ಕೆ ವರದಿ ಸಲ್ಲಿಸುವುದು. ವಿಚಾರಣಾಧಿಕಾರಿಗಳು ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ನಂತರ ನಿಯಮಾನುಸಾರ ನಿಗಧಿತ ಸಂಭಾವನೆ ಪಡೆಯಲು ಅರ್ಹರಿರುತ್ತಾರೆ.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

08/03/2017

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು,(ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಬೆಂಗಳೂರು.

2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ/ಜಲ ಸಂಪನ್ಮೂಲ ಇಲಾಖೆ/ ಸಣ್ಣ ನೀರಾವರಿ ಇಲಾಖೆ.
3. ಆಯುಕ್ತರು, ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು.
6. ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಧಾರವಾಡ,
7. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು, ಕೆ.ಆರ್.ವೃತ್ತ, ಬೆಂಗಳೂರು.
8. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ, ಬಂದರು ಮತ್ತು ಒಳನಾಡು ಜಲ ಸಾರಿಗೆ ಇಲಾಖೆ, (ಸೇವೆಗಳು-ಎ ಮತ್ತು ಸಿ).
9. ಶ್ರೀ ಎ.ಎಂ.ಪತ್ತಾರ, ನಿವೃತ್ತ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು, ಮನೆ.ನಂ.144, 2 ನೇ ಕ್ರಾಸ್, ಲಕ್ಷ್ಮೀನಗರ ಹತ್ತಿರ, ಹುಬ್ಬಳ್ಳಿ-580030 (ಮೊಬೈಲ್ ಸಂಖ್ಯೆ:9986153878).
10. ಕಾರ್ಯಪಾಲಕ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ, ರಾಯಚೂರು.
11. ಸಂಬಂಧಿಸಿದ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ರಾಯಚೂರು ಇವರ ಮುಖಾಂತರ).
12. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ.
13. ಗ್ರಾ.ಅ.ಪಂ.ರಾಜ್ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ/ ಪ್ರಧಾನ ಕಾರ್ಯದರ್ಶಿ(ಪಂ.ರಾಜ್) /ಜಂಟಿ ಕಾರ್ಯದರ್ಶಿ/ ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು.
14. ಶಾಖಾ ರಕ್ಷಾ ಕಡತ/ಕಂಪ್ಯೂಟರ್ ಸೆಲ್/ ಹೆಚ್ಚುವರಿ ಪ್ರತಿ.